# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 01. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2631 |
| 02. ಸದಸ್ಯರ ಹೆಸರು | : | ಶ್ರೀ ಅ.ದೇವೇಗೌಡ<br>(ಪದವೀಧರರ ಕ್ಷೇತ್ರ) |
| 03. ಉತ್ತರಿಸುವ ದಿನಾಂಕ | : | 24.03.2022 |
| 04. ಉತ್ತರಿಸುವ ಸಚಿವರು | : | ಮಾನ್ಯ ಗೃಹ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಗೃಹ ರಕ್ಷಕ ದಳದ ಸಿಬ್ಬಂದಿಗಳು ಮತ್ತು ಪೊಲೀಸ್ ಸಿಬ್ಬಂದಿಗಳ ಸಮವಸ್ತ್ರ ಒಂದೇ ರೀತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪೊಲೀಸ್ ಸಿಬ್ಬಂದಿ ಹಾಗೂ ಗೃಹ ರಕ್ಷದ ದಳದ ಸಿಬ್ಬಂದಿಗಳ ಸಮವಸ್ತ್ರದ ಬಣ್ಣ ಒಂದೇ ರೀತಿಯಾಗಿದ್ದು, ಬೆಲ್ಟ್ ಮತ್ತು ಕ್ಯಾಪ್‌ಗಳಲ್ಲಿ ಬದಲಾವಣೆ ಇರುತ್ತದೆ. |
| ಆ) | ಹಾಗಿದ್ದಲ್ಲಿ, ಅವರುಗಳು ಕರ್ತವ್ಯದ ಸಮಯದಲ್ಲಿ ಹಾಗೂ ಬಸ್‌ಗಳಲ್ಲಿ ಪ್ರಯಾಣ ಮಾಡುವ ಸಂದರ್ಭದಲ್ಲಿ ಸಾರ್ವಜನಿಕರಿಗೆ ಪೊಲೀಸ್ ಸಿಬ್ಬಂದಿ ಎಂಬುದೇ ಅನುಮಾನವಾಗಿರುವುದರಿಂದ, ಪೊಲೀಸ್ ಸಿಬ್ಬಂದಿಗಳಲ್ಲಿ ಮುಜುಗರ, ಆತ್ಮಸ್ಥೈರ್ಯ ಕುಗ್ಗುವುದರಿಂದ ರಾಜ್ಯ ಪೊಲೀಸ್ ಸಿಬ್ಬಂದಿಗಳ ಕ್ಯಾಪ್, ಸಮವಸ್ತ್ರ ಮತ್ತು ಶೂಗಳಿಗೆ (ನೆರೆ ರಾಜ್ಯಗಳಾದ ತಮಿಳುನಾಡು, ಕೇರಳ, ಮಹಾರಾಷ್ಟ್ರ ಇತರೆ ರಾಜ್ಯ ಮಾದರಿಯಂತೆಯೇ) ಬದಲಾವಣೆ ತರಬಹುದೇ; | ಪೊಲೀಸ್ ಸಿಬ್ಬಂದಿ ಹಾಗೂ ಗೃಹ ರಕ್ಷದ ದಳದ ಸಿಬ್ಬಂದಿಗಳ ಸಮವಸ್ತ್ರದ ಬಣ್ಣ ಒಂದೇ ರೀತಿಯಾಗಿದ್ದು, ಶೋಲ್ಡರ್ ಬ್ಯಾಡ್ಜ್, ಬೆಲ್ಟ್ ಮತ್ತು ಕ್ಯಾಪ್‌ಗಳು ಬೇರೆ ಬೇರೆಯಾಗಿರುತ್ತವೆ. ಇದರಿಂದಾಗಿ ಪೊಲೀಸ್ ಸಿಬ್ಬಂದಿಗಳು ಮತ್ತು ಗೃಹ ರಕ್ಷಕ ದಳದ ಸಿಬ್ಬಂದಿಗಳನ್ನು ಸುಲಭವಾಗಿ ಗುರುತಿಸಬಹುದಾಗಿರುತ್ತದೆ.<br><br>ರಾಜ್ಯದ ಪೊಲೀಸ್ ಅಧಿಕಾರಿ & ಸಿಬ್ಬಂದಿಗಳಲ್ಲಿ ಹೆಚ್ಚಿನ ಆತ್ಮಸ್ಥೈರ್ಯ ತುಂಬುವ ನಿಟ್ಟಿನಲ್ಲಿ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 140 ಇಎಫ್‌ಎಸ್ 2018. ದಿನಾಂಕ:07.03.2019 ರಂತೆ ಉತ್ತಮ ಗುಣಮಟ್ಟದ ಸಮವಸ್ತ್ರ ಹಾಗೂ ಕಿಟ್ ಸಾಮಾಗ್ರಿಗಳನ್ನು ವಿತರಿಸಲಾಗುತ್ತಿದೆ. ಆದ್ದರಿಂದ, ರಾಜ್ಯ ಪೊಲೀಸ್ ಸಿಬ್ಬಂದಿಗಳ ಕ್ಯಾಪ್, ಸಮವಸ್ತ್ರ ಮತ್ತು ಶೂಗಳಿಗೆ ಬದಲಾವಣೆ ತರುವ ಪ್ರಸ್ತಾವನೆ ಇರುವುದಿಲ್ಲ. |
| ಇ) | ಪ್ರತಿ 10 ವರ್ಷಗಳಿಗೊಮ್ಮೆ ಪೊಲೀಸ್ ಸಿಬ್ಬಂದಿಗಳ ಸಮವಸ್ತ್ರದಲ್ಲಿ ಬದಲಾವಣೆ ಮಾಡುವುದರಿಂದ, ಹೊಸ ಆಕಾಂಕ್ಷಿಗಳಿಗೆ ಹೆಚ್ಚಿನ ಆತ್ಮಸ್ಥೈರ್ಯ, ಉತ್ಸಾಹ ಮೂಡುವುದಲ್ಲದೆ ಸಾರ್ವಜನಿಕರಲ್ಲಿ ಸರ್ಕಾರದ ಬಗ್ಗೆ ಮತ್ತು ಪೊಲೀಸ್ ಇಲಾಖೆಯ ಬಗ್ಗೆ ಭರವಸೆ ಮೂಡುವಂತಹ ಕ್ರಮ ಕೈಗೊಳ್ಳುವುದೇ? | |

HD/54/PPS/2022

(ಆರಗ ಜ್ಞಾನೇಂದ್ರ)
ಮಾನ್ಯ ಗೃಹ ಸಚಿವರು